ಉ) ಹೌದು.

ಊ) ಇವುಗಳಲ್ಲಿ ವೈದ್ಯರು ಮತ್ತು ವೈದ್ಯಕೇತರ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದು, ಕೊರತೆ ಇರುವ ಕಡೆ ಹುದ್ದೆಗಳನ್ನು ನೇಮಕಾತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಋ) ಕೊರತೆ ಇರುವ ಕಡೆ ಹುದ್ದೆಗಳನ್ನು ನೇಮಕಾತಿ ಮಾಡಲಾಗುತ್ತಿದೆ.

70 (220) ಶ್ರೀ ಬಸವರಾಜ್ ರಾಯರೆಡ್ಡಿ (ಯಲ್‌ಬುರ್ಗ)): ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಹೊಸದಾಗಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲು ಸರ್ಕಾರವು ಉದ್ದೇಶಿಸಿದೆಯೇ ;

ಆ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಹೊಸದಾಗಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗುವುದು ;

ಇ) ಜಿಲ್ಲೆಗಳನ್ನು ಆಯ್ಕೆ ಮಾಡುವಾಗ ಅನುಸರಿಸಲಾಗುವ ಮಾನದಂಡವೇನು ;

ಈ) ಆಯ್ಕೆ ಮಾಡುವಾಗ ಡಾ: ನಂಜುಂಡಪ್ಪನವರು ಸರ್ಕಾರಕ್ಕೆ ಸಲ್ಲಿಸಲಾದ ಅಸಮತೋಲನ ನಿವಾರಣೆಯಂತೆ ಹಿಂದುಳಿದ ಜಿಲ್ಲೆಗಳನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದೇ ?

ಡಾ: ವಿ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು):

ಅ) ಹೌದು.

ಆ) ಕೇಂದ್ರ ಸರ್ಕಾರ ಅನುಮತಿ ನೀಡಿದಲ್ಲಿ ರಾಯಚೂರು, ಬೀದರ್ ಮತ್ತು ಶಿವಮೊಗ್ಗದಲ್ಲಿ ಪ್ರಾರಂಭ ಮಾಡಲು ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಇ) ಆದ್ಯತೆ ಮತ್ತು ಅಗತ್ಯಕ್ಕನುಗುಣವಾಗಿ.

ಈ) ಹೌದು.

72 (138) ಶ್ರೀ ಬಸವರಾಜ್ ಹೆಚ್.ಡಿ. (ವಿರಾಜಪೇಟೆ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪರಿಶಿಷ್ಟ ಪಂಗಡಗಳ ಪಟ್ಟಿಗೆ ಮೇದಾರ ಜನಾಂಗವನ್ನು ಸೇರಿಸುವ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಈಗಾಗಲೇ ಸಲ್ಲಿಸಿರುವುದು ನಿಜವಲ್ಲವೇ ;

ಆ) ಸದರಿ ಜನಾಂಗವನ್ನು ಈವರೆವಿಗೂ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸದೆ ಇರುವುದರಿಂದ ಆರ್ಥಿಕ ಹಾಗೂ ಶೈಕ್ಷಣಿಕವಾಗಿ ತುಂಬಾ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ರಾಜ್ಯ ಸರ್ಕಾರವು ಈಗಲಾದರೂ ಕೇಂದ್ರ ಸರ್ಕಾರವು ಸದರಿ ಪ್ರಸ್ತಾಪನೆಗೆ ಅಂಗೀಕಾರ ನೀಡುವಂತೆ ಒತ್ತಾಯ ಮಾಡುವುದೇ ?

ಶ್ರೀ ಬಾಲಚಂದ್ರ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು):

ಅ) ಹೌದು.